**<u>ದಿಃ 05.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. ಸಾಕ್ಷಿಯು ತನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿ ಪ್ರಮಾಣೀಕರಿಸಿರುತ್ತಾರೆ.</u>**

**<u>ಮುಂದುವರೆದ ಮುಖ್ಯ ವಿಚಾರಣೆ: ಶ್ರೀ. ಸಿ.ಹೆಚ್.ಜಿ. ವಾದಿಯ ಪರ ವಕೀಲರಿಂದಃ</u>**

ದಿನಾಂಕಃ 02-02-2023 ನೇ ಇಸ್ವಿಯ ನೋಂದಾಯಿವಲ್ಲದ ಖರೀದಿ ಕರಾರು ಪತ್ರವನ್ನು ಹಾಜರು ಪಡಿಸಿದ್ದು, ಅದನ್ನು ನಿ.ಪಿ.2 ಎಂದು ಗುರುತಿಸಲಾಯಿತು. ಶ್ರೀ ಶಿವಪ್ಪ ತಂದೆ ಬಸಪ್ಪ ರಿತ್ತಿಕುರುಬರ ಇವರ ಮರಣ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು, ಅದನ್ನು ನಿ.ಪಿ.3 ಎಂದು ಗುರುತಿಸಲಾಯಿತು. ಪ್ರತಿವಾದಿಗಳಿಗೆ ಕೊಟ್ಟಂತಹ ನೋಟಿಸಿನ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.4 ಎಂದು ಗುರುತಿಸಲಾಯಿತು. ಎರಡು ಅಂಚೆ ರಸೀದಿಗಳನ್ನು ಹಾಜರು ಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿ.ಪಿ.5 ಮತ್ತು 6 ಎಂದು ಗುರುತಿಸಲಾಯಿತು. 2 ಅಂಚೆ ಹಿಂಬರಹಗಳನ್ನು ಹಾಜರು ಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿ.ಪಿ.7 ಮತ್ತು 8 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು ಮಾಡಲು ಪ್ರತಿವಾದಿಯರ ಪರ ವಕೀಲರು ಸಮಯ ಕೇಳಿದ್ದು, ಸಮಯ ನೀಡಲಾಯಿತು.</u>**

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ ಹೇ ಕೇ ಸರಿ ಇದೆ.

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು
ಮತ್ತು ಸಿ.ಜೆ.ಎಂ, ಹಾವೇರಿ.